RNU AIR DHARWAD

# APRIL 8, 2026
# ALL INDIA RADIO- DHARWAD
# PRADESH SAMACHARA (KANNADA) 7:05 AM

**ಮುಖ್ಯಾಂಶಗಳು**

**ವಿಧಾನಸಭೆ ಉಪಚುನಾವಣೆ:** ಅಂತ್ಯಗೊಂಡ ಬಹಿರಂಗ ಪ್ರಚಾರ: ಮನೆ, ಮನೆಗೆ ಭೇಟಿ ನೀಡಿ ಮತದಾರರ ಮನವೊಲಿಕೆಗೆ ಮುಂದಾದ ಅಭ್ಯರ್ಥಿಗಳು.

**ವಿಧಾನಸಭೆ ಉಪಚುನಾವಣೆಯಲ್ಲಿ** ಮತದಾನ ಪ್ರಮಾಣ ಹೆಚ್ಚಳ, ಮತದಾರರನ್ನು ಆಕರ್ಷಿಸಲು ಜಿಲ್ಲಾಡಳಿತಗಳಿಂದ ವಿಶೇಷ ಉಪಕ್ರಮ.

**ಕುಡಿಯುವ** ನೀರು ಪೂರೈಕೆಯಲ್ಲಿ ಯಾವುದೇ ಸಮಸ್ಯೆ ಎದುರಾಗದಂತೆ ಮುನ್ನೆಚ್ಚರಿಕೆವಹಿಸಲು ವಿಧಾನಸಭೆ ಸ್ಪೀಕರ್ ಯು.ಟಿ ಖಾದರ್ ಸೂಚನೆ.

**ಬೀದಿನಾಯಿಗಳಿಗೆ ಒಂದೇ** ಕಡೆ ಆಹಾರ: ಕೋಲಾರ ನಗರಸಭೆಯಿಂದ ವಿನೂತನ ಕ್ರಮ: ಪ್ರತ್ಯೇಕ ಸ್ಥಳ ನಿಗದಿಗೊಳಿಸಿ ಫೀಡಿಂಗ್ ಜೋನ್ ನಿರ್ಮಾಣ.

**ಈಗ ವಾರ್ತೆಗಳ ವಿವರ**

*******

**ಇದೇ 9 ರಂದು ನಡೆಯಲಿರುವ ಬಾಗಲಕೋಟೆ** ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಬಹಿರಂಗ ಪ್ರಚಾರ ಅಂತ್ಯಗೊಂಡಿದ್ದು, ಅಭ್ಯರ್ಥಿಗಳು ಮನೆ ಮನೆಗೆ ಭೇಟಿ ನೀಡಿ, ಮತದಾರರ ಮನವೊಲಿಕೆಗೆ ಮುಂದಾಗಿದ್ದಾರೆ. ಬಾಗಲಕೋಟೆ ಉಪಚುನಾವಣೆ ಹಿನ್ನೆಲೆ, ಚುನಾವಣಾ ಆಯೋಗದ ನಿಯಮಾನುಸಾರ ಬಹಿರಂಗ ಸಭೆಗಳು, ರೋಡ್ ಶೋಗಳು ಹಾಗೂ ದೊಡ್ಡ ಪ್ರಮಾಣದ ಪ್ರಚಾರ ಕಾರ್ಯಕ್ರಮಗಳು ಅಂತ್ಯಗೊಂಡಿದ್ದು, ಕೊನೆಯ ಹಂತದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ ಮೇಟಿ ಹಾಗೂ ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ತಮ್ಮ ಬೆಂಬಲಿಗರೊಂದಿಗೆ ಮನೆ ಮನೆಗೆ ತೆರಳಿ ಮತಯಾಚನೆ ನಡೆಸುತ್ತಿದ್ದಾರೆ. ದಾವಣಗೆರೆ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಬಹಿರಂಗ ಪ್ರಚಾರ ಅಂತ್ಯಗೊಂಡಿದ್ದು, ಮನೆ ಮನೆ ಪ್ರಚಾರಕ್ಕೆ ಮಾತ್ರ ಅವಕಾಶ ನೀಡಲಾಗಿದೆ ಎಂದು ದಾವಣಗೆರೆ ಚುನಾವಣಾಧಿಕಾರಿ ಸಂತೋ ್ ಕುಮಾರ್ ತಿಳಿಸಿದ್ದಾರೆ.

*******

**ದಾವಣಗೆರೆ ದಕ್ಷಿಣ ವಿಧಾನಸಭಾ** ಕ್ಷೇತ್ರದ ಉಪ ಚುನಾವಣೆಯಲ್ಲಿ ಮತದಾನದ ಪ್ರಮಾಣ ಹೆಚ್ಚಿಸಲು ಹಾಗೂ ಮತದಾರರನ್ನು ಆಕರ್ಷಿಸಲು ದಾವಣಗೆರೆ ಜಿಲ್ಲಾಡಳಿತ 10 ವಿಶೇ ´ ಮತಗಟ್ಟೆಗಳನ್ನು ಸ್ಥಾಪಿಸಿದೆ. ಮಹಿಳಾ ಮತದಾರರು ಹೆಚ್ಚಿರುವ ಪ್ರದೇಶಗಳಲ್ಲಿ 'ಸಖಿ' ಮತಗಟ್ಟೆಗಳು, ಸ್ಥಳೀಯ ಕಲೆ, ಸಂಸ್ಕೃತಿ ಬಿಂಬಿಸಲು, ಗ್ರಾಮೀಣ ಸೊಗಡನ್ನು ಅನಾವರಣಗೊಳಿಸಲು ಮಾದರಿ ಮತಗಟ್ಟೆಗಳು, ಯುವಕರನ್ನು ಸೆಳೆಯಲು ಎರಡು ವಿಶೇ ´ ಮತಗಟ್ಟೆಗಳು, ವಿಶೇ ´ ಚೇತನರಿಗಾಗಿ ಪ್ರತ್ಯೇಕ ಮತಗಟ್ಟೆ ಇರಲಿವೆ. ಮತದಾನ ಪ್ರಮಾಣ ಹೆಚ್ಚಿಸಲು ಜಿಲ್ಲಾಡಳಿತದ ವತಿಯಿಂದ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಮತದಾರರಲ್ಲಿ ಜಾಗೃತಿ ಮೂಡಿಸಲು ಈಗಾಗಲೇ ಸ್ವೀಪ್ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ. ಜಿಲ್ಲಾ ಪಂಚಾಯ್ತಿ ಕಾರ್ಯ ನಿರ್ವಾಹಕ ಅಧಿಕಾರಿ ಗಿತ್ತೆ ವಿಠ್ಠಲ ಮಾಧವರಾವ್ ಅವರು.

**ಧ್ವನಿ–ಗಿತ್ತೆ ವಿಠಲ ಮಾಧವರಾವ್–35 ಸೆಕೆಂಡ್ಸ್**

*******

**ಸಾರ್ವಜನಿಕರಿಗೆ ಕುಡಿಯುವ** ನೀರಿನ ಪೂರೈಕೆಯಲ್ಲಿ ಯಾವುದೇ ಸಮಸ್ಯೆ ಎದುರಾಗದಂತೆ ಮುನ್ನೆಚ್ಚರಿಕೆವಹಿಸಬೇಕು ಎಂದು ಅಧಿಕಾರಿಗಳಿಗೆ ವಿಧಾನಸಭೆ ಸ್ಪೀಕರ್ ಯು.ಟಿ ಖಾದರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಕುಡಿಯುವ ನೀರಿನ  ಪರಿಸ್ಥಿತಿ ಕುರಿತಂತೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಗ್ರಾಮ ಪಂಚಾಯತಿಗಳು, ನಗರ ಸ್ಥಳೀಯ ಸಂಸ್ಥೆಗಳು,  ಬೇಸಿಗೆಯಲ್ಲಿ ಕುಡಿಯುವ ನೀರಿನ ಪೂರೈಕೆಗೆ ಹೆಚ್ಚಿನ ಒತ್ತು ನೀಡಬೇಕು.  ಯಾವುದೇ ಅಡೆತಡೆ ಇಲ್ಲದೆ ನೀರು ಪೂರೈಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದರು. ಸಾರ್ವಜನಿಕರ ದೂರುಗಳಿಗೆ ತ್ವರಿತವಾಗಿ ಸ್ಪಂದಿಸಬೇಕು. ಜಲಜೀವನ್ ಮಿ ´ನ್ ಯೋಜನೆಯಡಿ ನಿರ್ಮಿಸಲಾಗಿರುವ ಟ್ಯಾಂಕ್‌ಗಳಿಗೆ ಸಂಬಂಧಪಟ್ಟ ನೀರಿನ ಮೂಲಗಳಿಂದ ನೀರು ತಲುಪಿಸಿ ಜನವಸತಿ ಪ್ರದೇಶಗಳಿಗೆ ನಿರಂತರ ನೀರು ಪೂರೈಕೆಯಾಗುವಂತೆ ಗಮನಹರಿಸಬೇಕು. ಅಗತ್ಯವಿದ್ದಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಬೇಕು ಎಂದು ಸ್ಪಷ್ಟ ಸೂಚನೆ ನೀಡಿದರು.

*******

**ಬೇಸಿಗೆಯ ತಾಪಮಾನ ಹೆಚ್ಚುತ್ತಿರುವ** ಹಿನ್ನೆಲೆ, ಗ್ರಾಮೀಣ ಪ್ರದೇಶಗಳ ಜನ, ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆ ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ ಸೂಚಿಸಿದ್ದಾರೆ. ಜಿಲ್ಲಾ ಪಂಚಾಯಿತಿ ಕಚೇರಿ ಸಭಾಂಗಣದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಬಿಸಿಲಿನ ತೀವ್ರತೆ ದಿನದಿಂದ ದಿನಕ್ಕೆ ಹೆಚ್ಚುತ್ತಿರುವುದರಿಂದ ಜನರು ಆರೋಗ್ಯದ ಬಗ್ಗೆ ಎಚ್ಚರಿಕೆ ವಹಿಸಬೇಕು. ಬಿಸಿಲಿನಲ್ಲಿ ಹೆಚ್ಚು ಓಡಾಡದಂತೆ, ತಣ್ಣನೆಯ ನೀರು ಸೇವಿಸುವಂತೆ ಹಾಗೂ ನೆರಳಲ್ಲಿ ವಿಶ್ರಾಂತಿ ಪಡೆಯುವಂತೆ ಜನರಲ್ಲಿ ಜಾಗೃತಿ ಮೂಡಿಸಲು ಡಂಗುರ ಸಾರಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಕರ್ತವ್ಯ ನಿರ್ವಹಣೆಯಲ್ಲಿ

ನಿರ್ಲಕ್ಷ್ಯ ಕಂಡು ಬಂದರೆ ಸಂಬಂಧಿತ ಅಧಿಕಾರಿಗಳನ್ನು ನೇರವಾಗಿ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಸಿಇಓ ಎಚ್ಚರಿಕೆ ನೀಡಿದರು.

*******

**ಪ್ರಸ್ತುತ ಬೇಸಿಗೆಯ ಸಂದರ್ಭದಲ್ಲಿ** ಬಿಸಿಲಿನ ಪ್ರಖರತೆ ದಿನೇ ದಿನೇ ಹೆಚ್ಚುತ್ತಿದ್ದು, ಸಾರ್ವಜನಿಕರು ಬಿಸಿಲಿನ ತಾಪದಿಂದ ರಕ್ಷಿಸಿಕೊಳ್ಳಲು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಹೊರಡಿಸಲಾದ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಪಾಲಿಸುವಂತೆ ಜಿಲ್ಲಾಧಿಕಾರಿ ಸ್ವರೂಪ ಟಿ.ಕೆ ಸೂಚಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಅತೀ ಹೆಚ್ಚು ತಾಪಮಾನದದಿಂದ ನಿರ್ಜಲೀಕರಣ, ಶಾಖ ಸೆಳೆತ, ಶಾಖದ ಬಳಲಿಕೆ ಮತ್ತು ಶಾಖ ಆಘಾತದಂತಹ ದು ್ಪರಿಣಾಮಗಳು ಉಂಟಾಗುವ ಸಾಧ್ಯತೆ ಇದ್ದು, ಈ ಬಗ್ಗೆ ರಕ್ಷಣೆ ಪಡೆಯಲು ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ನಗರ ಹಾಗೂ ಗ್ರಾಮೀಣ ಭಾಗದ ಜನರಿಗೆ ಪೋಸ್ಟರ್, ಬ್ಯಾನರ್, ಜಿಂಗಲ್ಸ್‌ಗಳ ಮೂಲಕ ಮಾಹಿತಿ ನೀಡಿ, ಅರಿವು ಮೂಡಿಸಿ ಜನಸಾಮಾನ್ಯರ ಆರೋಗ್ಯ ರಕ್ಷಣೆಗೆ ಮುಂದಾಗಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

*******

**ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**

**ಪ್ರಕಟಣೆ–42 ಸೆಕೆಂಡ್ಸ್**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

*******

**ನಾರಿ ಶಕ್ತಿ ವಂದನಾ ಅಭಿಯಾನ** ಮಹಿಳಾ ಸಬಲೀಕರಣಕ್ಕೆ ನಾಂದಿಯಾಗಿದೆ. ಹಿಂದುಳಿದ ವರ್ಗಗಳ ಮಹಿಳೆಯರಿಗೆ ದಾರಿದೀಪವಾಗಿದೆ ಎಂದು ಕೋಲಾರ ಬಿಜೆಪಿ ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ಅರುಣಮ್ಮ ಹೇಳಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಮಹಿಳೆಯರು ತಾಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಉನ್ನತ ಸ್ಥಾನ ಪಡೆಯಲು ಈ ಅಭಿಯಾನ ಸಹಕಾರಿಯಾಗಲಿದೆ. ಹಿಂದುಳಿದ ವರ್ಗಗಳಲ್ಲೂ ರಾಜಕೀಯವಾಗಿ, ಆರ್ಥಿಕವಾಗಿ, ಸಾಮಾಜಿಕವಾಗಿ ಬೆಳೆಯಲು ಅನುಕೂಲವಾಗಿದೆ ಎಂದರು.

**ಧ್ವನಿ– ಅರುಣಮ್ಮ, ಬಿಜೆಪಿ– 31 ಸೆಕೆಂಡ್ಸ್**

*******

**ಸಾರ್ವಜನಿಕರು ಬೀದಿನಾಯಿಗಳಿಗೆ** ಒಂದೇ ಕಡೆ ಆಹಾರ ಹಾಕಲು ಅನುಕೂಲ ವಾಗುವಂತೆ, ಕೋಲಾರ ನಗರಸಭೆ ವಿನೂತನ ಕ್ರಮಕ್ಕೆ ಮುಂದಾಗಿದ್ದು, ಪ್ರತ್ಯೇಕ ಸ್ಥಳ ನಿಗದಿ ಮಾಡಿ ಫೀಡಿಂಗ್ ಜೋನ್ ನಿರ್ಮಿಸಿದೆ. ಕೋಲಾರ ನಗರದ ಬಡಾವಣೆಗಳಲ್ಲಿ ಬೀದಿನಾಯಿಗಳಿಗೆ ಸಾರ್ವಜನಿಕರು ಎಲ್ಲಿಬೇಕೆಂದರಲ್ಲಿ ಊಟ ಹಾಕುವುದನ್ನು ತಪ್ಪಿಸಲು ಹಾಗೂ ನೈರ್ಮಲ್ಯ ಕಾಪಾಡಲು ಈ ಕ್ರಮ ಕೈಗೊಳ್ಳಲಾಗಿದ್ದು, ಪ್ರತಿ ವಾರ್ಡಗೆ ಎರಡರಂತೆ ಇಂಥ ಆಹಾರ ಶೆಲ್ಟರ್ ವಿಶೇ ് ವ್ಯವಸ್ಥೆ ಮಾಡಲಾಗುತ್ತಿದೆ. ಜೊತೆಗೆ

ನಾಮಫಲಕವನ್ನೂ ಹಾಕಲಾಗುತ್ತಿದೆ. ಒಂದೇ ಕಡೆ ಆಹಾರ ಹಾಕುವ ವ್ಯವಸ್ಥೆ ಮಾಡಿದರೆ ಬೀದಿನಾಯಿಗಳ ಓಡಾಟಕ್ಕೆ ಸ್ವಲ್ಪವಾದರೂ ಕಡಿವಾಣ ಬೀಳಬಹುದು ಎಂಬ ಆಲೋಚನೆಯೊಂದಿಗೆ ಜಿಲ್ಲಾಡಳಿತದ ಸಹಯೋಗದಲ್ಲಿ ನಗರಸಭೆ ಈ ಹೆಜ್ಜೆ ಇರಿಸಿದೆ ಎಂದು ಎಂದು ನಗರಸಭೆ ಆಯುಕ್ತ ನವೀನ್ ಚಂದ್ರ ತಿಳಿಸಿದ್ದಾರೆ,

*******

**ಸಶಸ್ತ್ರ ಪೊಲೀಸ್ ಪ್ರಶಿಕ್ಷಣಾರ್ಥಿಗಳ** 8ನೇ ತಂಡದ ನಿರ್ಗಮನ ಪಥ ಸಂಚಲನ ಮೈಸೂರಿನಲ್ಲಿ ನಿನ್ನೆ ನಡೆಯಿತು. ದಕ್ಷಿಣ ವಲಯ ಪೊಲೀಸ್ ಮಹಾನಿರೀಕ್ಷಕ ಡಾಕ್ಟರ್ ಎಮ್.ಬಿ.ಬೋರಲಿಂಗಯ್ಯ, ಗೌರವ ವಂದನೆ ಸ್ವೀಕರಿಸಿ, ಉತ್ತಮ ಪ್ರದರ್ಶನ ತೋರಿದ ಪ್ರಶಿಕ್ಷಣಾರ್ಥಿಗಳಿಗೆ ಪುರಸ್ಕಾರ ಪ್ರದಾನ ಮಾಡಿದರು. ಈ ಸಂದರ್ಭದಲ್ಲಿ ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಉಪ ಪೊಲೀಸ್ ಆಯುಕ್ತ ಡಾಕ್ಟರ್ ಹರ್ಷ ಪ್ರಿಯಂವದ, ತರಬೇತಿ ಶಾಲೆಯ ಪ್ರಾಂಶುಪಾಲ ಸಿದ್ದನಗೌಡ ಪಾಟೀಲ ಸೇರಿದಂತೆ, ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

*******

## ಈಗ ಸಂಕ್ಷಿಪ್ತ ಸುದ್ದಿಗಳು

**ಬೆಂಗಳೂರು ಗ್ರಾಮಾಂತರ** ಜಿಲ್ಲೆಯಲ್ಲಿ ಇದೇ 23 ರಿಂದ ಜಾನುವಾರುಗಳಿಗೆ ಉಚಿತ ಕಾಲು ಬಾಯಿ ಲಸಿಕೆ ಹಾಕುವ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ರೈತರು ತಪ್ಪದೇ ತಮ್ಮ ಜಾನುವಾರುಗಳಿಗೆ ಲಸಿಕೆ ಹಾಕಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿ ಾ ತಿಳಿಸಿದ್ದಾರೆ.

**ಗದಗನ ಕೃಷಿ ಸಂಶೋಧನಾ** ಕೇಂದ್ರದಲ್ಲಿ ಮುಂಗಾರು ಪೂರ್ವ ಕೃಷಿಪರಿಕರ ಮಾರಾಟಗಾರರ ಸಭೆ ಹಾಗೂ ಯುರಿಯಾ ವಿತರಣಾ ತಂತ್ರಾಂಶದ ಕುರಿತು ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

*******

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

**ವಿಧಾನಸಭೆ ಉಪಚುನಾವಣೆ:** ಅಂತ್ಯಗೊಂಡ ಬಹಿರಂಗ ಪ್ರಚಾರ: ಮನೆ, ಮನೆಗೆ ಭೇಟಿ ನೀಡಿ ಮತದಾರರ ಮನವೊಲಿಕೆಗೆ ಮುಂದಾದ ಅಭ್ಯರ್ಥಿಗಳು.

**ವಿಧಾನಸಭೆ ಉಪಚುನಾವಣೆಯಲ್ಲಿ** ಮತದಾನ ಪ್ರಮಾಣ ಹೆಚ್ಚಳ, ಮತದಾರರನ್ನು ಆಕರ್ಷಿಸಲು ಜಿಲ್ಲಾಡಳಿತಗಳಿಂದ ವಿಶೇಷ ಉಪಕ್ರಮ.

**ಕುಡಿಯುವ** ನೀರು ಪೂರೈಕೆಯಲ್ಲಿ ಯಾವುದೇ ಸಮಸ್ಯೆ ಎದುರಾಗದಂತೆ ಮುನ್ನೆಚ್ಚರಿಕೆವಹಿಸಲು ವಿಧಾನಸಭೆ ಸ್ಪೀಕರ್ ಯು.ಟಿ ಖಾದರ್ ಸೂಚನೆ.

**ಬೀದಿನಾಯಿಗಳಿಗೆ ಒಂದೇ** ಕಡೆ ಆಹಾರ: ಕೋಲಾರ ನಗರಸಭೆಯಿಂದ ವಿನೂತನ ಕ್ರಮ: ಪ್ರತ್ಯೇಕ ಸ್ಥಳ ನಿಗದಿಗೊಳಿಸಿ ಫೀಡಿಂಗ್ ಜೋನ್ ನಿರ್ಮಾಣ.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

******END******